

ನಗುತ್ತಿದ್ದರು. ಆದರೆ, ಸೋತವರ ಬಳಿ ಉಳಿಯುತ್ತಿದ್ದ ಕಡಲೇಕಾಯನ್ನು ಅವರಿಗೇ ತಿನ್ನಲು ಬಿಡುತ್ತಿದ್ದರಿಂದ ನನ್ನ ಬಳಿ ಕಡಲೇಕಾಯಿಗಾಗಿ ಅವರೆಲ್ಲಾ ಕೈಯೊಡ್ಡುವುದು ತಪ್ಪುತ್ತಿರಲಿಲ್ಲ!

ಮುಂದಿನ ಓದಿಗೆ ಐದು ಮೈಲಿ ದೂರವಿದ್ದ ಪಟ್ಟಣದ ಹೈಸ್ಕೂಲಿಗೆ ಸೇರಿಸಿದರು. ನಮ್ಮೂರಿನಿಂದ ಅಲ್ಲಿಗಿದ್ದುದು ಒಂದೇ ಬಸ್ಸು. ಅದು ರಾತ್ರಿ ಒಂಬತ್ತಕ್ಕೋ– ಹತ್ತಕ್ಕೋ ಬಂದು ನಮ್ಮೂರಿನಲ್ಲಿ ಹಾಲ್ಟಾದರೆ ಬೆಳಗ್ಗೆ ಆರಕ್ಕೋ-ಏಳಕ್ಕೋ ಹೊರಟುಬಿಡುತ್ತಿತ್ತು. ಅದೇ ಬಸ್‌ನಲ್ಲಿ ಅದಾಗಲೇ ನನಗಿಂತ ಮೂರು ಕ್ಲಾಸ್ ಮುಂದಿದ್ದ ನಮ್ಮಕ್ಕ ಮೂರು ವರ್ಷ ಓಡಾಡಿಕೊಂಡು ಓದಿ ಭೇಷ್ ಎನಿಸಿಕೊಂಡಿದ್ದಳು. ನಾನು ಹಾಸಿಗೆ ಬಿಟ್ಟು ಏಳುವ ಮೊದಲೇ ಬಸ್ ನಮ್ಮೂರ ಗಡಿ ದಾಟಿ ಬಿಟ್ಟಿರುತ್ತಿದ್ದುದರಿಂದ 'ಅವಳ ಹಾಗೆ ಇದು ಚುರುಕಿಲ್ಲ' ಎನ್ನುವ ಹಣೆಪಟ್ಟಿ ಕಟ್ಟಿಕೊಳ್ಳುವಂತಾಯ್ತು. ಹತ್ತನೇ ಕ್ಲಾಸಿಗೆ ಅನಿವಾರ್ಯ ಕಾರಣದಿಂದ ನಗರದ ಶಾಲೆಗೆ ಸ್ಥಳಾಂತರವಾಯ್ತು. ಅಲ್ಲಿಯ ಗಣಿತದ ಸರ್ ಲೆಕ್ಕ ಕೊಟ್ಟು ಮಾಡಲು ಹೇಳಿದಾಗ ನಮ್ಮ ಸೆಕ್ಷನ್‌ನಲ್ಲೇ ಜಾಣೆ ಎನಿಸಿಕೊಂಡಿದ್ದ ಹುಡುಗಿ ಬೇಗಬೇಗ ಲೆಕ್ಕ ಮಾಡಿ ತೋರಿಸಿ ಪದೇಪದೇ ತಪ್ಪು ಎನಿಸಿಕೊಳ್ಳುತ್ತಿದ್ದಳು. ಅಲ್ಲಿಗೆ ಹೊಸಬಳಾಗಿದ್ದ ನಾನು ನನ್ನದೇ ಮಂದ್ರಸ್ಥಾಯಿಯಲ್ಲಿ ಸಮಸ್ಯೆಯನ್ನು ಬಿಡಿಸಿದಾಗ ಮಾಸ್ತರು 'ಅವಳ ಹಾಗೆ ಆಲೋಚನೆ ಮಾಡಿ ಲೆಕ್ಕ ಮಾಡು, ಆತುರ ಪಡಬೇಡ' ಎಂದು ಮೊದಲ ಬಾರಿಗೆ ನನ್ನ ಮಂದಮತಿಯನ್ನು ಪ್ರಶಂಸಿಸುವುದರೊಟ್ಟಿಗೇ ತಮ್ಮ ಮೆಚ್ಚಿನ ವಿದ್ಯಾರ್ಥಿನಿಗೆ ಬುದ್ಧಿವಾದ ಹೇಳಿ ನನ್ನನ್ನು ಅವಳ ಕೆಂಗಣ್ಣಿಗೆ ಗುರಿಯಾಗಿಸಿದ್ದರು. ಅವರಿಗೆ ಬಹಳ ಪ್ರಿಯವಾಗಿದ್ದ 'ಬೆಳೆಯಲು ನಿಧಾನವಾಗಿರುವ ಮರಗಳು ಅತ್ಯುತ್ತಮ ಫಲವನ್ನು ನೀಡುತ್ತವೆ' ಎನ್ನುವ ಫ್ರೆಂಚ್ ಲೇಖಕ ಮೋಲಿಯರ್‌ನ ಉಕ್ತಿಯನ್ನು